# ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 322 ಸಮನ್ವಯ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ 19-10-2012.

## ಸುತ್ತೋಲೆ

ವಿಷಯ:- ಸ್ಥಳೀಯ ಸಂಸ್ಥೆಗಳಾದ ಮಹಾನಗರ ಪಾಲಿಕೆ, ನಗರಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ಮತ್ತು ಅಭಿವೃದ್ಧಿ ಪ್ರಾಧಿಕಾರಗಳು, ಮತ್ತಿತ್ತರೆ ನಗರ ಸ್ಥಳೀಯ ಸಂಸ್ಥೆಗಳು ವಸೂಲಿ ಮಾಡಿದ ಆಸ್ತಿ ತೆರಿಗೆಯಲ್ಲಿ ವಸೂಲಾಗುವ ಶೇ. 3%ರಷ್ಟು ಭಿಕ್ಷುಕರ ಕರವನ್ನು ಕೇಂದ್ರ ಪರಿಹಾರ ಸಮಿತಿಯ ನಿಧಿಗೆ ಜಮಾ ಮಾಡುವ ಬಗ್ಗೆ.

- - -

ಕರ್ನಾಟಕ ರಾಜ್ಯದಲ್ಲಿ ಭಿಕ್ಷಾಟನೆ ನಿರ್ಮೂಲನೆ ಮತ್ತು ಭಿಕ್ಷೆಯಲ್ಲಿ ತೊಡಗಿರುವವರ ಪುನರ್ ವಸತಿಗಾಗಿ ಕರ್ನಾಟಕ ಭಿಕ್ಷಾಟನೆ ನಿಷೇಧ ಕಾಯ್ದೆ 1975 ಮತ್ತು ಇದಕ್ಕೆ ಅನ್ವಯವಾಗುವ ನಿಯಮಗಳು ಜಾರಿಯಲ್ಲಿದ್ದು, ರಾಜ್ಯ ಮಟ್ಟದಲ್ಲಿ ಕೇಂದ್ರ ಪರಿಹಾರ ಸಮಿತಿ ಮತ್ತು ಇದರ ಅಧೀನದಲ್ಲಿ 14 ಜಿಲ್ಲೆಗಳಲ್ಲಿ ನಿರಾಶ್ರಿತರ ಪರಿಹಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಈ ಕೇಂದ್ರಗಳ ನಿರ್ವಹಣೆಗೆ ರಾಜ್ಯಾದ್ಯಂತ ಸ್ಥಳೀಯ ಸಂಸ್ಥೆಗಳಿಂದ ವಸೂಲು ಮಾಡಲಾಗುವ ಭಿಕ್ಷುಕ ಕರದ ಸಂಪನ್ಮೂಲವೇ ಆಧಾರವಾಗಿರುತ್ತದೆ.

ಕರ್ನಾಟಕ ಭಿಕ್ಷಾಟನೆ ನಿಷೇಧ ಕಾಯ್ದೆ 1975ರ ಸೆಕ್ಷನ್ 31(1)ರ ಪ್ರಕಾರ ಸಾರ್ವಜನಿಕರು ಹೊಂದಿರುವ ಭೂಮಿ ಮತ್ತು ಕಟ್ಟಡಗಳ ಮೇಲೆ ವಿಧಿಸುವ ತೆರಿಗೆಗಳಲ್ಲಿ ಶೇ. 3 ರಷ್ಟು ಭಿಕ್ಷುಕರ ಕರವನ್ನು ಸ್ಥಳೀಯ ಸಂಸ್ಥೆಗಳು ವಸೂಲಿ ಮಾಡಿ ಕೇಂದ್ರ ಪರಿಹಾರ ಸಮಿತಿ ನಿಧಿಗೆ ಪಾವತಿಸಬೇಕಾಗಿರುತ್ತದೆ. ಈ ಅವಕಾಶವನ್ನು ಸುತ್ತೋಲೆ ಸಂಖ್ಯೆ: ಎಸ್‌ಡಬ್ಲ್ಯೂಆರ್ 5 ಎಸ್‌ಬಿಆರ್ 76 (ಈ), ದಿನಾಂಕ 30-08-1976 ರಲ್ಲಿ ಕಲ್ಪಿಸಲಾಗಿರುತ್ತದೆ. ಮತ್ತು ಈ ರೀತಿ ವಸೂಲಾದ ಭಿಕ್ಷುಕರ ಕರವನ್ನು ಕೇಂದ್ರ ಪರಿಹಾರ ಸಮಿತಿಗೆ ಜಮಾ ಮಾಡದಿದ್ದಲ್ಲಿ ಕಂದಾಯ ಬಾಕಿ ಎಂದು ವಸೂಲಿಸಲು ಇದೇ ಕಾಯ್ದೆಯ ಸೆಕ್ಷನ್ 31(5)ರಲ್ಲಿ ಅವಕಾಶ ಕಲ್ಪಿಸಲಾಗಿದೆ. ಆದರೆ ರಾಜ್ಯದ ಹಲವಾರು ಸ್ಥಳೀಯ ಸಂಸ್ಥೆಗಳು ಮತ್ತು ಗ್ರಾಮ ಪಂಚಾಯಿತಿಗಳು ಸಂಗ್ರಹಿಸಿದ ಭಿಕ್ಷುಕರ ಕರವನ್ನು ಕೇಂದ್ರ ಪರಿಹಾರ ಸಮಿತಿ ನಿಧಿಗೆ ಪಾವತಿಸದೆ ಇರುವುದನ್ನು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಶ್ರೀ ಕೃಷ್ಣಭಟ್ ಎಂಬುವವರು—ಭಿಕ್ಷುಕಠ ಕರ ವಸೂಲಾತಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಂಖ್ಯೆ: 10075/2007 ಅನ್ನು ಸಲ್ಲಿಸಿದ್ದು, ಸದರಿ ಅರ್ಜಿಯಲ್ಲಿ ದಿನಾಂಕ 08-09-2012ರಂದು ಮಾನ್ಯ ಉಚ್ಚ ನ್ಯಾಯಾಲಯವು ಈ ಕೆಳಕಂಡ ಅಂಶವನ್ನು ವ್ಯಕ್ತಪಡಿಸಿದೆ.

"After having collected the beggary cess to retain it for itself, such an action would undoubtedly, amount to misappropriation thereof, which would lead to serious penal consequences. There can be no excuse for not transferring the amount actually collected by way of beggary cess to the extent the same has to be transferred to the Central Relief Committee".

ಆದ್ದರಿಂದ ಸ್ಥಳೀಯ ಸಂಸ್ಥೆಗಳು ವಸೂಲಿ ಮಾಡಿದ ನಿವೇಶನ ಮತ್ತು ಕಟ್ಟಡದ ತೆರಿಗೆಯಲ್ಲಿನ ಶೇ.3 ರಷ್ಟು ಭಿಕ್ಷಕರ ಕರ ಭಾಗದ ಹಣವನ್ನು ಸಂಬಂಧಿಸಿದ ಪ್ರಾಧಿಕಾರಕ್ಕೆ ಪಾವತಿಸದೇ ಇದ್ದಲ್ಲಿ ಅದು ನ್ಯಾಯಾಲಯ ನಿಂದನೆಗೆ ಅವಕಾಶ ವಾಗುತ್ತದೆ ಎಂಬ ಅಂಶವನ್ನು ಸ್ಥಳೀಯ ಸಂಸ್ಥೆಗಳ ಗಮನಲ್ಲಿರಿಸಿಕೊಳ್ಳತಕ್ಕದ್ದು.

ಆದ್ದರಿಂದ ಈಗಾಗಲೇ ವಸೂಲಿಯಾಗಿ ಪಾವತಿಸದೇ ಬಾಕಿ ಇರುವ ಭಿಕ್ಷುಕರ ಕರದ ಶೇಕಡಾ 3ರಷ್ಟು ಹಣವನ್ನು ಸಂಬಂಧಿಸಿದ ಭಟವಾಡೆ ಅಧಿಕಾರಿಗಳು ಕೂಡಲೇ ಕೇಂದ್ರ ಪರಿಹಾರ ಸಮಿತಿಗೆ ಪಾವತಿಸತಕ್ಕದ್ದು.

ಇನ್ನು ಮುಂದೆ ವಸೂಲಿಯಾಗುವ ಭಿಕ್ಷುಕರ ಕರದ ಭಾಗದ ಹಣವನ್ನು ಪ್ರತಿ ತ್ರೈಮಾಸಿಕದ ಅಂತ್ಯಕ್ಕೆ ಅನ್ವಯವಾಗುವಂತೆ ಸ್ಥಳೀಯ ಸಂಸ್ಥೆಗಳ ಬಟವಾಡೆ ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರ ಪರಿಹಾರ ಸಮಿತಿಗೆ ಪಾವತಿಸತಕ್ಕದ್ದು. ಒಂದು ವೇಳೆ ಪಾವತಿಸದಿದ್ದಲ್ಲಿ, ಶಿಸ್ತು ಪ್ರಾಧಿಕಾರವು ಅವರ ವಿರುದ್ಧ ಶಿಸ್ತು ಕ್ರಮ ಜರುಗಿಸತಕ್ಕದ್ದು.

ಅಲ್ಲದೇ ಪ್ರತಿ ತ್ರೈಮಾಸಿಕ ಅಂತ್ಯಕ್ಕೆ ಜಿಲ್ಲಾ ಮಟ್ಟದ ಪ್ರಾಧಿಕಾರದಿಂದ ಅಥವಾ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳ ಪ್ರಾಧಿಕಾರಗಳಿಂದ ಭಿಕ್ಷುಕ ಕರದ ಅಂಕಿ ಅಂಶಗಳು, ಪಾವತಿ ಮತ್ತು ಬಾಕಿ (DCB-Demand Collection, Balance) ಮಾಹಿತಿಯನ್ನು ಕಾರ್ಯದರ್ಶಿಗಳು, ಕೇಂದ್ರ ಪರಿಹಾರ ಸಮಿತಿ, ಬೆಂಗಳೂರು ಇವರ ಇ-ಮೇಲ್ ವಿಳಾಸ crcbng@yahoo.co.inರ ಮುಖೇನ ಮಾಹಿತಿ ಒದಗಿಸುವಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಈ ಮೂಲಕ ಸೂಚಿಸಲಾಗಿದೆ.

19/01/15

(ಡಾ॥ ಅಮಿತಾ ಪ್ರಸಾದ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

1) ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
5) ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ.ಗೋಪುರ, ಬೆಂಗಳೂರು.
6) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ – ಪೌರಾಡಳಿತ ಆಯುಕ್ತರ ಮೂಲಕ.
8) ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ– ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆರವರ ಮುಖೇನ.
9) ಶಾಖಾ ರಕ್ಷಾ ಕಡತ/ಇಲಾಖೆಯ ಅಂತರ್‌ಜಾಲ ತಾಣ/ಹೆಚ್ಚುವರಿ ಪ್ರತಿ.

ಪ್ರತಿ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3) ಸರ್ಕಾರದ ಜಂಟಿ ಕಾರ್ಯದರ್ಶಿ 1&2 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
4) ಸರ್ಕಾರದ ಉಪ ಕಾರ್ಯದರ್ಶಿಗಳು, ಆಂತರಿಕ ಆರ್ಥಿಕ ಸಲಹೆಗಾರರ ಶಾಖೆ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
6) ಜಂಟಿ ನಿರ್ದೇಶಕರು (ಯೋಜನೆ) ಇವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.